ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಸಾಮಾಜಿಕವಾಗಿ ಮುಂದುವರೆದ ವ್ಯಕ್ತಿಗಳು/ ವರ್ಗಗಳನ್ನು (ಕೆನೆಪದರ) ಹಿಂದುಳಿದ ವರ್ಗಗಳ ಮೀಸಲಾತಿಯಿಂದ ಹೊರತು ಪಡಿಸಲು ಕೆನೆಪದರ ನೀತಿಯ ವಾರ್ಷಿಕ ಆದಾಯ ಮಿತಿಯನ್ನು ರೂ.4.50 ಲಕ್ಷಗಳಿಂದ ರೂ.6.00 ಲಕ್ಷಗಳಿಗೆ ಹೆಚ್ಚಿಸುವ ಬಗ್ಗೆ.

ಓದಲಾಗಿದೆ:
1. ಸರ್ಕಾರದ ಆದೇಶ ಸಂಖ್ಯೆ: ಸಕಇ 225 ಬಿಸಿಎ 2000 ದಿನಾಂಕ:30.03.2002
2. ಸರ್ಕಾರದ ಆದೇಶ ಸಂಖ್ಯೆ: ಸಕಇ 104 ಬಿಸಿಎ 2011 ದಿನಾಂಕ:06.02.2012.
3. ಸರ್ಕಾರದ ಆದೇಶ ಸಂಖ್ಯೆ: ಹಿಂವಕ 192 ಬಿಸಿಎ 2013 ದಿನಾಂಕ:04.09.2013.
4. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಏಕಕಡತ ಪ್ರಸ್ತಾವನೆ ಸಂಖ್ಯೆ:ಹಿಂವಕನಿ/ಮಾಶಾ/ಸಿಆರ್-2/2015-16, ದಿನಾಂಕ:20.04.2015.

ಪ್ರಸ್ತಾವನೆ:

ಮೇಲೆ (1)ರಲ್ಲಿ ಓದಲಾದ ಆದೇಶದ ಅನುಬಂಧ-IIರ ಅಂಶ-3 ರಲ್ಲಿ ಕೆನೆಪದರವನ್ನು ನಿರ್ಣಯಿಸಲು ಹಿಂದುಳಿದ ವರ್ಗಗಳ ಪ್ರವರ್ಗ-2ಎ, 2ಬಿ, 3ಎ ಮತ್ತು 3ಬಿಗಳಿಗೆ ಅನ್ವಯಿಸುವಂತೆ ವಾರ್ಷಿಕ ಆದಾಯ ಮಿತಿಯನ್ನು ರೂ.2.00 ಲಕ್ಷಗಳಿಗೆ ನಿಗದಿಗೊಳಿಸಲಾಗಿದೆ. ತದನಂತರ ಮೇಲೆ (2)ರಲ್ಲಿ ಓದಲಾದ ಆದೇಶದಲ್ಲಿ ಒಟ್ಟು ವಾರ್ಷಿಕ ಆದಾಯ ಮಿತಿಯನ್ನು (Gross Annual Income) ರೂ.2.00 ಲಕ್ಷಗಳಿಂದ ರೂ.3.50 ಲಕ್ಷಗಳಿಗೆ ನಿಗದಿಗೊಳಿಸಿದೆ. ಹಾಗೂ ಮೇಲೆ (3)ರಲ್ಲಿ ಓದಲಾದ ಆದೇಶದಲ್ಲಿ ಒಟ್ಟು ವಾರ್ಷಿಕ ಆದಾಯ ಮಿತಿಯನ್ನು (Gross Annual Income) ರೂ.3.50 ಲಕ್ಷಗಳಿಂದ ರೂ.4.50 ಲಕ್ಷಗಳಿಗೆ ಹೆಚ್ಚಿಸಿ ನಿಗದಿಗೊಳಿಸಲಾಗಿದೆ.

2015-16ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-234ರಲ್ಲಿ ಹಿಂದುಳಿದ ವರ್ಗಗಳ ಕೆನೆಪದರ ಮಿತಿಯನ್ನು ಪ್ರಸ್ತುತ ಇರುವ ರೂ.4.50 ಲಕ್ಷಗಳಿಂದ ರೂ.6.00ಲಕ್ಷಗಳಿಗೆ ಹೆಚ್ಚಿಸಲಾಗುವುದು ಎಂದು ಘೋಷಿಸಲಾಗಿರುತ್ತದೆ.

ಅದರಂತೆ ಮೇಲೆ (4)ರಲ್ಲಿ ಓದಲಾದ ಪ್ರಸ್ತಾವನೆಯಲ್ಲಿ ಈ ಬಗ್ಗೆ ಆದೇಶ ಹೊರಡಿಸುವಂತೆ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರು ಸರ್ಕಾರವನ್ನು ಕೋರಿರುತ್ತಾರೆ. ಆದ್ದರಿಂದ ಈ ಕೆಳಕಂಡ ಆದೇಶ.

<u>ಸರ್ಕಾರದ ಆದೇಶ ಸಂಖ್ಯೆ:ಹಿಂವಕ 148 ಬಿಸಿಎ 2015 ಬೆಂಗಳೂರು, ದಿನಾಂಕ:04.06.2015</u>

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಸರ್ಕಾರಿ ಆದೇಶ ಸಂಖ್ಯೆ: ಸಕಇ 225 ಬಿಸಿಎ 2000 ದಿನಾಂಕ:30.03.2002 ಅನುಬಂಧ-IIರ ಅಂಶ (3)ರಲ್ಲಿ ಕೆನೆಪದರವನ್ನು ನಿರ್ಣಯಿಸಲು ಹಿಂದುಳಿದ ವರ್ಗಗಳ ಪ್ರವರ್ಗ-2ಎ, 2ಬಿ, 3ಎ ಮತ್ತು 3ಬಿ ಗಳಿಗೆ ಅನ್ವಯಿಸುವಂತೆ ಕೆನೆಪದರಕ್ಕೆ ನಿಗಧಿಪಡಿಸಿರುವ ಅಭ್ಯರ್ಥಿಯ ಮತ್ತು ಅವರ ತಂದೆ -ತಾಯಿ/ಪೋಷಕರ ವಾರ್ಷಿಕ ಒಟ್ಟು ಆದಾಯ ಮಿತಿಯನ್ನು (Gross Annual Income ) ರೂ.4.50 ಲಕ್ಷಗಳಿಂದ ರೂ.6.00ಲಕ್ಷಗಳಿಗೆ ಈ ಕೂಡಲೇ ಜಾರಿಗೆ ಬರುವಂತೆ ಹೆಚ್ಚಿಸಿ ಆದೇಶಿದೆ.

ಸರ್ಕಾರದ ಆದೇಶ ಸಂಖ್ಯೆ:ಸಕಇ 225 ಬಿಸಿಎ 2000 ದಿನಾಂಕ:30.03.2002 ರಲ್ಲಿರುವ ಇತರೆ ಷರತ್ತುಗಳಲ್ಲಿ ಯಾವುದೇ ಬದಲಾವಣೆಗಳಿರುವುದಿಲ್ಲ.

ಈ ಆದೇಶವನ್ನು ಆರ್ಥಿಕ ಇಲಾಖೆ ಟಿಪ್ಪಣಿ ಸಂಖ್ಯೆ:ಆಇ 430 ವೆಚ್ಚ-3/2015, ದಿನಾಂಕ:28.05.2015ರಲ್ಲಿ ನೀಡಿರುವ ಸಹಮತಿ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ
(ಎನ್.ಆರ್.ಎರೆಕುಪ್ಪಿ)
ಸರ್ಕಾರದ ಅಧೀನ ಕಾರ್ಯದರ್ಶಿ-1
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

ಇವರಿಗೆ:

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು, ಇವರಿಗೆ ಮುಂದಿನ ವಿಶೇಷ ಸಂಚಿಕೆಯಲ್ಲಿ ಪ್ರಕಟಿಸಿ 1000 ಪ್ರತಿಗಳನ್ನು ಸರ್ಕಾರದ ಪ್ರಧಾನ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ವಿಕಾಸಸೌಧ ಇವರಿಗೆ ಕಳುಹಿಸಲು ಕೋರಿದೆ.